# Bangalore
# Regional News
# 30.12.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹೊಸ ವರ್ಷದ ಸಂಭ್ರಮಾಚರಣೆಗೆ ರಾಜ್ಯ ಸಜ್ಜು ; ಬೆಂಗಳೂರು, ಹುಬ್ಬಳ್ಳಿ, ಕೊಡಗಿನಲ್ಲಿ ಬಿಗಿ ಭದ್ರತೆ
2. ಕೃಷ್ಣಾ ಮೇಲ್ದಂಡೆ ಯೋಜನೆಯ ಭೂ–ಸ್ವಾಧೀನ ಪ್ರಕ್ರಿಯೆಗೆ ಮೊದಲ ಆದ್ಯತೆ – ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ವಿಧಾನಪರಿಷತ್‌ನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ ಪ್ರಕಟ
4. ಕೋಗಿಲು ಬಡಾವಣೆಯಲ್ಲಿದ್ದ ಅಕ್ರಮ ನಿವಾಸಿಗಳಿಗೆ ನಿವೇಶನ ; ಸರ್ಕಾರದ ವಿರುದ್ಧ ಸಚಿವೆ ಶೋಭಾ ಕರಂದ್ಲಾಜೆ ಅಸಮಾಧಾನ

***************

ಹೊಸ ವರ್ಷ 2026ರ ಸ್ವಾಗತ ಹಾಗೂ ಸಂಭ್ರಮಾಚರಣೆಗೆ ಇಡೀ ರಾಜ್ಯವೇ ಸಜ್ಜಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ.

ಕೋರಮಂಗಲ, ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಸೇರಿದಂತೆ ಹಲವೆಡೆ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಲಕ್ಷಾಂತರ ಜನ ಸೇರುವ ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆಯಲ್ಲಿ ಕಿಡಿಗೇಡಿಗಳ ವಿರುದ್ಧ ನಿರಂತರವಾಗಿ ನಿಗ ವಹಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಕೆ ನೀಡಿದ್ದಾರೆ.

ಹೊಸ ವರ್ಷ ಮುಗಿದ ಬಳಿಕವೂ ಯಾರಾದರೂ ಸಂತ್ರಸ್ತರು ದೂರು ನೀಡಿದರೆ ಇಲ್ಲವೇ ವಿಡಿಯೋ ಸಿಕ್ಕರೆ ಪ್ರಕರಣ ದಾಖಲಿಸಲಾಗುವುದು ಎಂದು ತಿಳಿಸಿದ್ದಾರೆ.

ಕೋರಮಂಗಲದಲ್ಲಿಂದು ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಹಾಗೂ ಪೊಲೀಸ್ ಉಪ ಆಯುಕ್ತರಾದ ಸಾ.ರಾ.ಫಾತೀಮ ಅವರು ಪ್ರಮುಖ ರಸ್ತೆಗಳಲ್ಲಿ ಪಾದಯಾತ್ರೆ ನಡೆಸಿ ಭದ್ರತಾ ಸಿದ್ಧತೆಗಳನ್ನು ಪರಿಶೀಲನೆ ನಡೆಸಿದರು.

***************

ಇತ್ತೀಚಿನ ದಿನಗಳಲ್ಲಿ ಯುವಕರು ಮಾದಕ ವ್ಯಸನನಗಳಿಗೆ ದಾಸರಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಹೊಸ ವರ್ಷ ಆಗಮಿಸುತ್ತಿದ್ದಂತೆ ಅವಳಿ ನಗರದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ, ಮಾದಕ ವಸ್ತುಗಳ ನಿರ್ಮೂಲನೆ ವಿರುದ್ಧ ಪೊಲೀಸ್ ಕಮೀಷನ್‌ರೇಟ್ ವತಿಯಿಂದ ಹುಬ್ಬಳ್ಳಿಯಲ್ಲಿ ಬೈಕ್‌ರ್‍ಯಾಲಿ ಮೂಲಕ ಜಾಗೃತಿ ಅಭಿಯಾನ ಮೂಡಿಸಲಾಯಿತು.

ಹುಬ್ಬಳ್ಳಿಯ ನೆಹರು ಮೈದಾನದಿಂದ ಆರಂಭವಾದ ಬೈಕ್‌ರ್‍ಯಾಲಿ, ಚನ್ನಮ್ಮ ಸರ್ಕಲ್, ಕೊಪ್ಪಿಕರ ರಸ್ತೆ, ಗೋಕುಲ ರೋಡ್ ಸೇರಿದಂತೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಈ ವೇಳೆ ಮಾತನಾಡಿದ, ಪೊಲೀಸ್ ಕಮೀಷನರ್ ಎನ್.ಶಶಿಕುಮಾರ್ ಹೊಸ ವರ್ಷವನ್ನು ಶಾಂತಿಯುತವಾಗಿ ಆಚರಿಸುವಂತೆ ಹುಬ್ಬಳ್ಳಿ ಜನತೆಗೆ ಮನವಿ ಮಾಡಿದ್ದಾರೆ.

ಧ್ವನಿ : ಎನ್. ಶಶಿಕುಮಾರ್

***************

ಕೊಡಗು ಜಿಲ್ಲೆಯಲ್ಲಿ ಹೊಸ ವರ್ಷಾಚರಣೆ ಹೆಸರಲ್ಲಿ ಕಾನೂನು ಉಲ್ಲಂಘನೆ, ಅಕ್ರಮ ಚಟುವಟಿಕೆ ಕಂಡು ಬಂದಲ್ಲಿ ಶಿಸ್ತು ಕ್ರಮ ಜರುಗಿಸುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಎಚ್ಚರಿಕೆ ನೀಡಿದ್ದಾರೆ.

ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೋಂ ಸ್ಟೇ, ರೆಸಾರ್ಟ್‌ಗಳಲ್ಲಿ ಸಂಭ್ರಮಾಚರಣೆ ಮಾಡಲು ಯಾವುದೇ ಅಡ್ಡಿ ಇಲ್ಲ. 10 ಗಂಟೆಯ ಬಳಿಕ ನಿಗದಿತ ಮಿತಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದ ರೀತಿಯಲ್ಲಿ ಧ್ವನಿವರ್ಧಕಗಳನ್ನು ಬಳಸಬೇಕು ಎಂದು ಸೂಚಿಸಿದ್ದಾರೆ.

ತೆರೆದ ಪ್ರದೇಶಗಳಲ್ಲಿ ಸಂಭ್ರಮಾಚರಣೆ ಮಾಡಲು ಅನುಮತಿ ಕಡ್ಡಾಯ ಎಂದು ತಿಳಿಸಿದ್ದಾರೆ.

ಹೋಂ ಸ್ಟೇ, ರೆಸಾರ್ಟ್‌ಗಳಲ್ಲಿ ಆಯೋಜಿಸಲಾಗುವ ಪಾರ್ಟಿಗಳಲ್ಲಿ ಕಾನೂನು ಬಾಹಿರ ಕೃತ್ಯ ಕಂಡು ಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

***************

ಕೇರಳ ಮುಖ್ಯಮಂತ್ರಿ, ರಾಜ್ಯ ಸರ್ಕಾರದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು ಎಂದು ಹೇಳಿದ್ದೇನೆಯೇ ಹೊರತು ಕೇರಳಿಗರ ಬಗ್ಗೆ ಮಾತನಾಡಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಕರ್ನಾಟಕ ನಿರಾವರಿ ನಿಗಮ ಹಾಗೂ ಕೃಷ್ಣ ಜಲಭಾಗ್ಯ ನಿಗಮದ ನಿರ್ದೇಶಕರ ಮಂಡಳಿಯ ಸಭೆ ನಡೆಸಿದ್ದು, ಕೃಷ್ಣ ಮೇಲ್ದಂಡೆ ಯೋಜನೆಯ ಭೂ–ಸ್ವಾಧೀನ ಪ್ರಕ್ರಿಯೆಗೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

***************

ಕರ್ನಾಟಕ ವಿಧಾನಪರಿಷತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳಿಗೆ ಕಾಂಗ್ರೆಸ್ ಅಭ್ಯರ್ಥಿಗಳನ್ನು ಪ್ರಕಟಿಸಿದೆ.

ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಮೋಹನ್ ಲಿಂಬಿಕಾಯಿ, ಆಗ್ನೇಯ ಪದವಿ ಕ್ಷೇತ್ರಕ್ಕೆ ಶಶಿ ಹುಲಿಕುಂಟೆಮಠ್, ಈಶಾನ್ಯ ಶಿಕ್ಷಕರ ಕ್ಷೇತ್ರಕ್ಕೆ ಶರಣಪ್ಪ ಮಟ್ಟೂರು, ಬೆಂಗಳೂರು ಶಿಕ್ಷಕರ ಕ್ಷೇತ್ರಕ್ಕೆ ಪುಟ್ಟಣ್ಣ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ ಎಂದು ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿಧಾನಪರಿಷತ್‌ಗೆ ನವೆಂಬರ್ 2026ರಲ್ಲಿ ಚುನಾವಣೆ ನಡೆಯಲಿದೆ. ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರವು ಬೆಳಗಾವಿ, ಧಾರವಾಡ, ಬಾಗಲಕೋಟೆ, ವಿಜಯಪುರ, ಗದಗ ಮತ್ತು ಕಾರವಾರ ಜಿಲ್ಲೆಗಳನ್ನು ಒಳಗೊಂಡಿದೆ.

ಈಶಾನ್ಯ ಶಿಕ್ಷಕರ ಕ್ಷೇತ್ರವು ಬಳ್ಳಾರಿ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳನ್ನು ಒಳಗೊಂಡಿದೆ. ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರವು ಕೋಲಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಒಳಗೊಂಡಿದೆ.

ಬೆಂಗಳೂರು ಶಿಕ್ಷಕರ ಕ್ಷೇತ್ರವು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳು ಬಿಬಿಎಂಪಿ, ರಾಮನಗರ ಪ್ರದೇಶವನ್ನು ಒಳಗೊಂಡಿದೆ.

***************

ಚುನಾವಣಾ ಆಯೋಗದ ವೇಳಾಪಟ್ಟಿಗನುಗುಣವಾಗಿ ಇಂದು ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯೂ ಆದ ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯ ಅಂತಿಮ ಮತದಾರರ ಪಟ್ಟಿಯಲ್ಲಿ ಒಟ್ಟು 3 ಸಾವಿರದ 302 ಮತದಾರರು ನೋಂದಣಿಯಾಗಿದ್ದಾರೆ.

ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಅರ್ಹ ಮತದಾರರು ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

***************

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಅಂತಿಮ ಪಟ್ಟಿ ಪ್ರಕಟಿಸಲಾಗಿದ್ದು, ಒಟ್ಟು 31 ಸಾವಿರದ 214 ಮತದಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಮತ್ತು ಕ್ಷೇತ್ರದ ಮತದಾರರ ನೋಂದಣಾಧಿಕಾರಿಯಾಗಿರುವ ಜಹೀರಾ ನಸೀಮ ತಿಳಿಸಿದ್ದಾರೆ.

ಮತದಾರರ ಪಟ್ಟಿಯನ್ನು ಕ್ಷೇತ್ರದ ವ್ಯಾಪ್ತಿಯ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ಸಹಾಯಕ ಆಯುಕ್ತರು ಹಾಗೂ ತಹಶೀಲ್ದಾರ್ ಕಚೇರಿಯಲ್ಲಿ ವೀಕ್ಷಿಸಬಹುದಾಗಿದೆ ಎಂದು ಹೇಳಿದ್ದಾರೆ.

ಚುನಾವಣಾ ಆಯೋಗದ ನಿರ್ದೇಶನದಂತೆ ನವೆಂಬರ್ 1ರಂದು ಅರ್ಹತಾ ದಿನವನ್ನಾಗಿ ಪರಿಗಣಿಸಿ ಅಂತಿಮ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಬೆಂಗಳೂರು ನಗರದ ಕೋಗಿಲು ಬಡಾವಣೆಯಲ್ಲಿ ಶೆಡ್‌ಗಳನ್ನು ನಿರ್ಮಿಸಿಕೊಂಡು ಅಕ್ರಮವಾಗಿ ನೆಲೆಸಿದ್ದವರನ್ನು ತೆರವು ಮಾಡಿದ ಬಳಿಕ ಬೈಯಪ್ಪನಹಳ್ಳಿಯಲ್ಲಿ ಮನೆ ನೀಡುವುದಾಗಿ ಘೋಷಣೆ ಮಾಡಿರುವ ಸರ್ಕಾರದ ಕ್ರಮಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಗಿಲು ಬಡಾವಣೆಯಲ್ಲಿದ್ದ ಅಕ್ರಮ ನಿವಾಸಿಗಳಿಗೆ ನಿವೇಶನ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ.

ಉತ್ತರ ಕರ್ನಾಟಕದ ಹಲವು ಮಂದಿ ಹತ್ತಾರು ವರ್ಷಗಳಿಂದ ಬೆಂಗಳೂರಿನಲ್ಲಿ ನೆಲೆಸಿದ್ದು, ಸ್ವಂತ ಮನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ವಸತಿ ಇಲಾಖೆ ಸೇರಿದಂತೆ ಹಲವು ಪ್ರಾಧಿಕಾರಗಳಿಗೆ ಅರ್ಜಿಗಳನ್ನು ಸಲ್ಲಿಸಿದ್ದರೂ ಪ್ರಯೋಜನವಾಗುತ್ತಿಲ್ಲ. ಆದರೆ, ಅಕ್ರಮವಾಗಿ ನೆಲೆಸಿರುವವರಿಗೆ ಮನೆಗಳನ್ನು ನೀಡುವುದಕ್ಕೆ ಮುಂದಾಗಿರುವುದು ಸರಿ ಅಲ್ಲ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಮಂಡ್ಯ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಒಟ್ಟು 151 ಮನೆಗಳು ಮುಂಗಾರಿನಲ್ಲಿ ಹಾನಿಗೊಳಗಾಗಿದ್ದು ಈಗಾಗಲೇ ಅರ್ಹರಿಗೆ 60 ಲಕ್ಷ 36 ಸಾವಿರ ಪರಿಹಾರ ಧನವನ್ನು ನೀಡಲಾಗಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಕೆ.ಡಿ.ಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಧಿಕಾರಿಗಳು ಮನೆ ಹಾನಿಗೊಳಗಾದವರ ವಿವರಗಳನ್ನು ರಾಜೀವ್ ಗಾಂಧಿ ಹೌಸಿಂಗ್ ಪೋರ್ಟಲ್‌ನಲ್ಲಿ ನಮೂದಿಸಿ ಶೀಘ್ರವಾಗಿ ಮನೆ ನಿರಾಶ್ರಿತರಿಗೆ ಪರಿಹಾರ ಒದಗಿಸುವಂತೆ ಸೂಚಿಸಿದ್ದಾರೆ.

ಈ ಹಿಂದೆ ದರಖಾಸ್ತ್ ಪೋಡಿ ಮಾಡಲು ಕನಿಷ್ಠ 5 ದಾಖಲೆಗಳ ಆಗತ್ಯ ಇತ್ತು. ಆದರೆ ಈಗ 3 ದಾಖಲೆ ಇದ್ದರೆ ದರಖಾಸ್ತ್ ಪೋಡಿ ಮಾಡಲಾಗುತ್ತಿದೆ. ಮುಂದಿನ ಆರು ತಿಂಗಳೊಳಗಾಗಿ ಪೌತಿ ಖಾತಾ ಆಂದೋಲನದಲ್ಲಿ ಯಾವುದೇ ಅರ್ಜಿಯನ್ನು ಬಾಕಿ ಉಳಿಸಿಕೊಳ್ಳದೆ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದ್ದಾರೆ.

***************

ಖರೀದಿಸುವ ವೈದ್ಯಕೀಯ ಉಪಕರಣಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದಂತೆ ಮತ್ತು ರೋಗಿಗಳ ಚಿಕಿತ್ಸೆ ಮತ್ತು ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ತೋರುವ ವೈದ್ಯರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳುವಂತೆ ಕಾರವಾರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮದ್ ಮೊಹಿಸೀನ್ ಸೂಚನೆ ನೀಡಿದ್ದಾರೆ.

ಕಾರವಾರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡಿ, ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೋಗಿಗಳಿಗೆ ಉತ್ತಮ ವೈದ್ಯಕೀಯ ಸೌಲಭ್ಯಗಳು ದೊರೆಯುವಂತೆ ಮಾಡಬೇಕು ಎಂದು ಸೂಚಿಸಿದ್ದಾರೆ.

ಪ್ರಸ್ತುತ ಕ್ರಿಮ್ಸ್‌ನಲ್ಲಿ ಹೊರರೋಗಿಗಳು ಮತ್ತು ಒಳರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆಯ ಸಂಖ್ಯೆಯಲ್ಲಿ ಹೆಚ್ಚಳವಾಗಬೇಕು ಎಂದು ನಿರ್ದೇಶನ ನೀಡಿದ್ದಾರೆ.

*******ಮುಕ್ತಾಯ********